# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಇಂಜಿನಿಯರ್ (ಗ್ರೇಡ್-1) ವೃಂದದ ನೇಮಕಾತಿ - ವಿದ್ಯಾರ್ಹತೆ ನಿಗದಿಪಡಿಸುವ ಬಗ್ಗೆ – ಕಾರ್ಯಕಾರಿ ಆದೇಶ.

**ಉಲ್ಲೇಖ:**
1. ಅಧಿಸೂಚನೆ ಸಂಖ್ಯೆ: ಗ್ರಾಅಪ 17 ಜಿಪ ಅ 2020 ದಿನಾಂಕ: 13.05.2020.
2. ಕರ್ನಾಟಕ ಲೋಕ ಸೇವಾ ಆಯೋಗದ ಅಧಿಸೂಚನೆ ಸಂಖ್ಯೆ: ಪಿ.ಎಸ್‌ಸಿ/1/ಆರ್.ಟಿ.ಬಿ./2021 ದಿನಾಂಕ: 21.02.2022.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: 1ರಲ್ಲಿ ಓದಲಾದ ದಿನಾಂಕ: 13.05.2020ರ ಆದೇಶದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಸಹಾಯಕ ಇಂಜಿನಿಯರ್(ಗ್ರೇಡ್-1) ವೃಂದಕ್ಕೆ ಈ ಕೆಳಕಂಡಂತೆ ಕನಿಷ್ಠ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ.

| Category po Post and Scale of Pay | Minimum Qualification |
|---|---|
| Assistant Engineer (Grade-1) (Rs. 43100-83900) | **For Direct Recruitment:** Must be a holder of BE in Civil/ Environment from an university recognized by Government of Karnataka. |
| ಸಹಾಯಕ ಇಂಜಿನಿಯರ್ (ಗ್ರೇಡ್-1) (ರೂ. 43100-83900) | **ನೇರ ನೇಮಕಾತಿ:** ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದಿರುವ ವಿಶ್ವವಿದ್ಯಾಲಯದಿಂದ ಸಿವಿಲ್ / ಪರಿಸರ ವಿಭಾಗದಲ್ಲಿ ಬಿ.ಇ. ಪದವಿ ಪಡೆದಿರಬೇಕು. |

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನೇರ ನೇಮಕಾತಿ ಕೋಟಾದ ಸಹಾಯಕ ಇಂಜಿನಿಯರ್ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಕರ್ನಾಟಕ ಲೋಕಸೇವಾ ಆಯೋಗವು ಮೇಲೆ ಓದಲಾದ ಕ್ರಮಸಂಖ್ಯೆ:(2)ರ ಅಧಿಸೂಚನೆ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿರುತ್ತದೆ.

ತತ್ಸಂಬಂಧ ಬಿ.ಟೆಕ್ (ಸಿವಿಲ್) ಪದವಿ ಪಡೆದ ಅಭ್ಯರ್ಥಿಗಳು ಹಾಗೂ Construction Technology and Management ಪದವಿ ಪಡೆದ ಅಭ್ಯರ್ಥಿಗಳು ಸರ್ಕಾರಕ್ಕೆ ಮನವಿ ಸಲ್ಲಿಸಿ ಬಿ.ಇ. (ಸಿವಿಲ್) ಪದವಿಯಲ್ಲಿನ ವಿಷಯಗಳನ್ನೇ ತಾವೂ ಸಹ ಅಭ್ಯಾಸ ಮಾಡಿದ್ದು, ಕೇವಲ ಬಿ.ಇ. (ಸಿವಿಲ್) ಮತ್ತು ಎನ್ವಿರಾನ್ ಮೆಂಟ್ ಪದವಿ ಪಡೆದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದಲ್ಲಿ ಇದರಿಂದ ತಮಗೆ ಅನ್ಯಾಯವಾಗುತ್ತದೆಂದು ತಿಳಿಸಿ ಈ ಸಂಬಂಧದ ನಿಯಮಗಳಿಗೆ ಸೂಕ್ತ ತಿದ್ದುಪಡಿ ಮಾಡಿ ತಮಗೂ ಅವಕಾಶ ನೀಡಬೇಕೆಂದು ಕೋರಿದ್ದಾರೆ.

ಸರ್ಕಾರವು ಸದರಿ ಕೋರಿಕೆಯ ಬಗ್ಗ ಪರಿಶೀಲಿಸಿರುತ್ತದೆ. ಬಿ.ಇ. (ಸಿವಿಲ್) ಪದವಿಗೆ ಸಮಾನಾಂತರವಾದ ಇತರೆ ಪದವಿಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೂ ಸಹ ಗ್ರಾಮೀಣ ಕುಡಿಯುವ ನೀರುಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಇಂಜಿನಿಯರ್ (ಗ್ರೇಡ್-1) ಹುದ್ದೆಯ ನೇರ ನೇಮಕಾತಿಗೆ ಅವಕಾಶ ನೀಡುವುದು ಅವಶ್ಯವೆಂದು ಸರ್ಕಾರವು ಪರಿಗಣಿಸಿರುತ್ತದೆ. ಈ ಸಂಬಂಧ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಪ್ರಕ್ರಿಯೆ ಪೂರ್ಣಗೊಳ್ಳಲು ಹೆಚ್ಚಿನ ಸಮಯಾವಕಾಶದ ಅವಶ್ಯಕತೆ ಇರುತ್ತದೆ. ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗವು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಿರುವ ಕಾರಣ ಈ ದಿಸೆಯಲ್ಲಿ ತುರ್ತು ಕ್ರಮ ಜರುಗಿಸುವ ಅವಶ್ಯಕತೆ ಇರುವುದನ್ನು ಮನಗಂಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತ ತಿದ್ದುಪಡಿ ಮಾಡುವುದನ್ನು ಬಾಕಿ ಇರಿಸಿ ಕಾರ್ಯಕಾರಿ ಆದೇಶದ ಮೂಲಕ ಕನಿಷ್ಠ ವಿದ್ಯಾರ್ಹತೆಯನ್ನು ಮಾರ್ಪಾಡು ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 96 ಎಸ್ ಎಸ್ ಕೆ 2022,**

**ಬೆಂಗಳೂರು ದಿನಾಂಕ: 23.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಶಿಷ್ಟದ ಕ್ರಮಸಂಖ್ಯೆ: 13 ರಲ್ಲಿ ಸಹಾಯಕ ಇಂಜಿನಿಯರ್ (ಗ್ರೇಡ್-1) ವೃಂದಕ್ಕೆ ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವುದ್ನು ಬಾಕಿ ಇರಿಸಿ ಈ ಕೆಳಕಂಡಂತೆ ಮಾರ್ಪಡಿಸಿ ಆದೇಶಿಸಿದೆ:-

| Category of Post and Scale of Pay | Minimum Qualification |
|---|---|
| Assistant Engineer (Grade-1) (Rs. 43100-83900) | **For Direct Recruitment:**<br>Graduate in Engineering (Civil) or Environmental Engineering from a University / Institution recognized by Government of Karnataka or Government of India. |
| ಸಹಾಯಕ ಇಂಜಿನಿಯರ್ (ಗ್ರೇಡ್-1) (ರೂ. 43100-83900) | **ನೇರ ನೇಮಕಾತಿ:**<br>ಕರ್ನಾಟಕ ಸರ್ಕಾರ ಅಥವಾ ಭಾರತ ಸರ್ಕಾರದಿಂದ ಮಾನ್ಯತೆ ಪಡೆದಿರುವ ವಿಶ್ವವಿದ್ಯಾಲಯ/ ಸಂಸ್ಥೆಯಿಂದ ಸಿವಿಲ್ ಇಂಜಿನಿಯರಿಂಗ್ ಅಥವಾ ಎನ್ವಿರಾನ್‌ಮೆಂಟಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಪದವಿ ಪಡೆದಿರಬೇಕು. |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಸಿದ್ದೇಶ ಪೂತಲಕಟ್ಟಿ)**
ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ-1)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು

4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ,(ದಕ್ಷಿಣ), ಕೆ.ಆರ್.ವೃತ್ತ, ಬೆಂಗಳೂರು.
6. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್ ಸೈಟ್ ನಲ್ಲಿ ಪ್ರಕಟಿಸಲು
10. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ